ಅ) ಇಲ್ಲ .

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಬರಗಾಲ ಪರಿಸ್ಥಿತಿಯನ್ನು ಎದುರಿಸಲು ಜಿಲ್ಲಾಧಿಕಾರಿಗಳ ಮುಖಾಂತರ ಕಂದಾಯ ಇಲಾಖೆಯು ಕುಡಿಯುವ ನೀರನ್ನು ಒದಗಿಸುವ ಕಾರ್ಯಕ್ರಮವನ್ನೂ ಸಹ ಹಮ್ಮಿಕೊಳ್ಳಲಾಗುತ್ತಿದೆ.

ಹೈದರಾಬಾದ್- ಕರ್ನಾಟಕ ಮಂಡಳಿ.

(1185) ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ):- ಯೋಜನಾ, ಸಾಂಖ್ಯಿಕ ಹಣಕಾಸು ಮತ್ತು ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :-

ಅ) ಹೈದರಾಬಾದ್ ಕರ್ನಾಟಕ ಮಂಡಳಿಯನ್ನು ರಚಿಸಲಾಗಿದೆಯೇ ;

ಆ) ಹಾಗಿದ್ದಲ್ಲಿ, ಮಂಡಳಿಯ ಅಧ್ಯಕ್ಷರ ಹಾಗೂ ಸದಸ್ಯರ ಹೆಸರುಗಳೇನು ;

ಇ) ಮಂಡಳಿಯು ಇಲ್ಲದೆಯೇ ಅಭಿವೃದ್ಧಿ ಕಾರ್ಯಗಳನ್ನು ತೆಗೆದುಕೊಳ್ಳಲು ಸಾಧ್ಯವೇ;

ಈ) ಮಂಡಳಿಯು ರಚಿತವಾಗದಿದ್ದಲ್ಲಿ ಯಾವಾಗ ರಚಿಸಲಾಗುವುದು ;

ಉ) ಮಂಡಳಿಗೆ ಯಾವ ಪಕ್ಷಕ್ಕೂ ಸೇರದ ವ್ಯಕ್ತಿಯನ್ನು, ಅಧ್ಯಕ್ಷರನ್ನಾಗಿ ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀಮತಿ ಕೆ.ಎಸ್.ನಾಗರತ್ನಮ್ಮ (ಯೋಜನಾ, ಸಾಂಖ್ಯಿಕ ಹಣಕಾಸು ಮತ್ತು ಸಾಂಖ್ಯಿಕ ಸಚಿವರು)-

ಅ) ಇನ್ನೂ ಇಲ್ಲ.

ಆ) (ಅ) ಉತ್ತರದ ಪ್ರಕಾರ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಸಾಧ್ಯವಿದೆ.

ಈ) ಹೈದರಾಬಾದ್ - ಕರ್ನಾಟಕ ಅಭಿವೃದ್ಧಿ ಮಂಡಳಿಯ ರಚನೆಯ ಬಗ್ಗೆ ಮಸೂದೆ ಅಂಗೀಕೃತವಾಗಿದ್ದು, ಅಧಿನಿಯಮವನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಈ ಅಧಿನಿಯಮವು ದಿನಾಂಕ 10ನೇ ಮಾರ್ಚ್ 1992 ರಿಂದ ಜಾರಿಗೆ ಬಂದಿರುತ್ತದೆ.

ಉ) ಹೈದರಾಬಾದ್ - ಕರ್ನಾಟಕ ಮಂಡಳಿಯ ಕಾಯ್ದೆಯ ಪ್ರಕಾರ ಅಧ್ಯಕ್ಷರನ್ನು ನೇಮಿಸಲಾಗುವುದು.

ಪೌರ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ವಿಶೇಷ ಸೌಲಭ್ಯ.

(2327) ಶ್ರೀ ಕರಿಯಣ್ಣ (ಹೊಳೆಹೊನ್ನೂರು):- ವಸತಿ ಮತ್ತು ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :-

ಅ) ಪೌರ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ವಿಶೇಷವಾಗಿ ಸೌಲಭ್ಯ ಮತ್ತು ಅವಕಾಶವನ್ನು ಸರ್ಕಾರದ ವತಿಯಿಂದ ನೀಡಲಾಗುವುದೇ ?

ಆ) ನೀಡಿದ್ದಲ್ಲಿ ಈ ಪೌರಕಾರ್ಮಿಕರ ಮಕ್ಕಳಿಗೆ ಸ್ಥಾಪನೆ ಮಾಡಿರುವ ಹಾಸ್ಟೆಲ್‌ಗಳೆಷ್ಟು ?

ಇ) ಈ ಸೌಲಭ್ಯ ಕಲ್ಪಿಸದಿದ್ದಲ್ಲಿ ಯಾವಾಗ ಇದನ್ನು ಮಾಡಲಾಗುವುದು ?

ಶ್ರೀ ಕೆ.ಜೆ.ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):-

ಅ) ವಿಶೇಷ ಸೌಲಭ್ಯ ಮತ್ತು ಅವಕಾಶವನ್ನು ನೀಡಿರುವುದಿಲ್ಲ.

ಆ) ಪೌರ ಕಾರ್ಮಿಕರ ಮಕ್ಕಳಿಗೆಂದೇ ಯಾವುದೇ ಪ್ರತ್ಯೇಕ ಹಾಸ್ಟೆಲ್ ಇರುವುದಿಲ್ಲ.

ಇ) ಪುರಸಭೆಯ ಹಾಗು ಇತರೆ ವಿದ್ಯಾಕೇಂದ್ರಗಳು ಇರುವ ಪುರಸಭೆ, ನಗರಸಭೆ ವ್ಯಾಪ್ತಿಯಲ್ಲಿಯೇ ಎಲ್ಲಾ ಪೌರ ಕಾರ್ಮಿಕರು ವಾಸಿಸುವುದರಿಂದ ಪ್ರತ್ಯೇಕ ಹಾಸ್ಟೆಲ್ ವ್ಯವಸ್ಥೆಯನ್ನು ಮಾಡುವ ಪ್ರಶ್ನೆಯು ಉದ್ಭವಿಸುವುದಿಲ್ಲ.